**1133 ಶ್ರೀ ಗೋಪಾಲಕೃಷ್ಣ ಎನ್.ವೈ. (ಮೊಳಕಾಲ್ಮೂರು)** : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿತ್ರದುರ್ಗ ಜಿಲ್ಲೆ, ಮೊಳಕಾಲ್ಮೂರು ಕ್ಷೇತ್ರಕ್ಕೆ ಸೇರಿದ ತಳಕು ಹೋಬಳಿಯಲ್ಲಿ ಬಹಳ ಹಳೆಯದಾದ ವಿದ್ಯುತ್ ಕಂಬಗಳು ವಿದ್ಯುತ್ ಲೈನ್ ಹಾಗೂ ವಿದ್ಯುತ್ ವೈರುಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಹಳೆಯದಾದ ವಿದ್ಯುತ್ ಕಂಬಗಳು ವಿದ್ಯುತ್ ಲೈನ್ ಹಾಗೂ ವಿದ್ಯುತ್ ವೈರುಗಳನ್ನು ಬದಲಾಯಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ಒದಗಿಸುವುದು)?

**ಶ್ರೀ ಕೆ.ಎಸ್. ಈಶ್ವರಪ್ಪ (ಇಂಧನ ಸಚಿವರು)** :

ಅ) ಹೌದು, ಗಮನಕ್ಕೆ ಬಂದಿದೆ.

ಆ) ಚಿತ್ರದುರ್ಗ ಜಿಲ್ಲೆ, ಮೊಳಕಾಲ್ಮೂರು ಕ್ಷೇತ್ರಕ್ಕೆ ಸೇರಿದ ತಳಕು ಹೋಬಳಿಯಲ್ಲಿ ಕಳೆದ ವರ್ಷವಾದ 2008–09 ರಲ್ಲಿ ಹಳೆಯದಾದ 4 ಸಂಖ್ಯೆಗಳ ಕಂಬಗಳು ಹಾಗೂ 5.73 ಕಿ.ಮೀ. ಉದ್ದದ ಹಳೆಯ ವಿದ್ಯುತ್ ವಾಹಕವನ್ನು ಬದಲಾಯಿಸಲಾಗಿದೆ.

ಪ್ರಸಕ್ತ ವರ್ಷವಾದ 2009–10 ರಲ್ಲಿ ಒಟ್ಟು 6 ಕಾಮಗಾರಿಗಳಿಗೆ ಅಂದಾಜು 26.88 ಲಕ್ಷ ರೂ.ಗಳಿಗೆ ಅನುಮೋದನೆ ನೀಡಲಾಗಿದ್ದು, ಹಳೆಯದಾಗಿರುವ 113 ಕಂಬಗಳನ್ನು ಹಾಗೂ 17.97 ಕಿ.ಮೀ. ಉದ್ದದ ಹಳೆಯ ವಿದ್ಯುತ್ ವಾಹಕಗಳನ್ನು ಬದಲಾಯಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳ ಲಾಗಿದೆ. ಈ ಕಾಮಗಾರಿಗಳನ್ನು ಡಿಸೆಂಬರ್–2009ರ ಅಂತ್ಯದ ವೇಳೆಗೆ ಪೂರ್ಣಗೊಳಿಸುವ ಗುರಿಯನ್ನು ಹೊಂದಲಾಗಿದೆ.

**251 ಶ್ರೀ ಮಹೇಶ್ ಎಸ್.ಆರ್. (ಕೃಷ್ಣರಾಜನಗರ)** : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಜಿಲ್ಲೆಯಲ್ಲಿನ ರೈತರಿಗೆ ಸರ್ಕಾರದ ವತಿಯಿಂದ ಉಚಿತವಾಗಿ ಪಂಪ್‌ಸೆಟ್‌ಗಳನ್ನು ನೀಡಲಾಗಿದೆಯೇ?

ಆ) ಹಾಗಿದ್ದಲ್ಲಿ, ಫಲಾನುಭವಿಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರಗಳನ್ನು ನೀಡುವುದು);

ಇ) ಮೈಸೂರು ಜಿಲ್ಲೆಯಲ್ಲಿ ಇದುವರೆವಿಗೂ ಎಷ್ಟು ಟ್ರಾನ್ಸ್‌ಫಾರ್ಮರ್ ಗಳನ್ನು ಅಳವಡಿಸಲಾಗಿದೆ? (ತಾಲ್ಲೂಕುವಾರು ವಿವರಗಳನ್ನು ನೀಡುವುದು);